# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** : 383

**ಮಾನ್ಯ ಸದಸ್ಯರ ಹೆಸರು** : ಶ್ರೀಮತಿ ಬಲ್ಕೀಸ್ ಬಾನು (ವಿಧಾನ ಸಭೆಯಿಂದ ಚುನಾಯಿತರಾದವರು)

**ಉತ್ತರಿಸಬೇಕಾದ ದಿನಾಂಕ** : 18.07.2024

**ಉತ್ತರಿಸುವ ಸಚಿವರು** : ಕಾನೂನು, ನ್ಯಾಯ, ಮಾನವ ಹಕ್ಕುಗಳು ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಶಿವಮೊಗ್ಗ ಜಿಲ್ಲೆಯ ತೀರ್ಥಹಳ್ಳಿ ತಾಲ್ಲೂಕಿನಹಣಗೇರಿ ಕಟ್ಟೆ ಹಾಗೂ ಪೀರನಗುಡ್ಡೆ ಕ್ಷೇತ್ರಗಳು ಹಿಂದು ಮತ್ತು ಮುಸಲ್ಮಾನರ ಭಾವೈಕ್ಯತ ಕ್ಷೇತ್ರಗಳಾಗಿದ್ದು, ಈ ಸ್ಥಳಗಳಿಗೆ ಪ್ರತಿದಿನ ಸಾವಿರಾರು ಭಕ್ತಾದಿಗಳು ಭೇಟಿ ನೀಡಲು ಬರುತ್ತಿರುವ ಹಿನ್ನೆಲೆಯಲ್ಲಿ ಸದರಿ ಕ್ಷೇತ್ರಗಳು ಅಘೋಷಿತ ಪ್ರವಾಸೋದ್ಯಮ ಕ್ಷೇತ್ರಗಳಾಗಿ ಮಾರ್ಪಟಿದ್ದು, ಈ ಕ್ಷೇತ್ರಗಳಲ್ಲಿ ಮೂಲಸೌಲಭ್ಯಗಳ ಕೊರತೆಯಿಂದ ಬರುವ ಭಕ್ತಾದಿಗಳು ತೊಂದರೆಯನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಪ್ರಸ್ತಾವನೆ ಇಲಾಖೆಯಲ್ಲಿ ಸ್ವೀಕೃತವಾಗಿರುವುದಿಲ್ಲ. |
| ಆ) | ಬಂದಿದಲ್ಲಿ, ಸದರಿ ಕ್ಷೇತ್ರಗಳನ್ನು ಪ್ರವಾಸೋದ್ಯಮ ಕ್ಷೇತ್ರಗಳಾಗಿ ಘೋಷಿಸಿ ಅಲ್ಲಿ ಬರುವ ಜನರಿಗೆ ಮೂಲಸೌಲಭ್ಯ ಹಾಗೂ ಇತರೆ ಸೌಕರ್ಯಗಳನ್ನು ಕಲ್ಪಿಸಲು ಸರ್ಕಾರದಿಂದ ಕ್ರಮ ಕೈಗೊಳ್ಳಲಾಗುವುದೇ? (ವಿವರ ನೀಡುವುದು) | ಉದ್ಭವಿಸುವುದಿಲ್ಲ.<br><br>ಆದಾಗ್ಯೂ, ಸದರಿ ಹಣಗೇರಿ ಕಟ್ಟೆ ಹಾಗೂ ಪೀರನಗುಡ್ಡೆ ಕ್ಷೇತ್ರಗಳನ್ನು ಇಲಾಖೆಯಿಂದ ಗುರುತಿಸಿರುವ ಪ್ರವಾಸಿ ತಾಣಗಳ ಪಟ್ಟಿಗೆ ಸೇರ್ಪಡೆಗೊಳಿಸುವ ಬಗ್ಗೆ ಪ್ರಸ್ತಾವನೆ ಸ್ವೀಕೃತವಾದಲ್ಲಿ ನಿಯಮಾನುಸಾರ ಪರಿಶೀಲಿಸಿ, ಇಲಾಖೆಗೆ ಆಯವ್ಯಯದಲ್ಲಿ ಒದಗಿಸುವ ಅನುದಾನದ ಲಭ್ಯತೆಗನುಗುಣವಾಗಿ ಹಾಗೂ ಆರ್ಥಿಕ ಇಲಾಖೆಯ ಸೂಚನೆಗಳನ್ವಯ ನಿಯಮಾನುಸಾರ ಪ್ರವಾಸಿ ಸೌಲಭ್ಯಗಳನ್ನು ಒದಗಿಸುವ ಬಗ್ಗೆ ಪರಿಶೀಲಿಸಲಾಗುವುದು. |

**TOR 160 TDV 2024**

(ಎಚ್.ಕೆ.ಪಾಟೀಲ್)
ಕಾನೂನು, ನ್ಯಾಯ, ಮಾನವ ಹಕ್ಕುಗಳು
ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ
ಹಾಗೂ ಪ್ರವಾಸೋದ್ಯಮ ಸಚಿವರು